ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ವೈದ್ಯಕೀಯ ಶಿಕ್ಷಣ ಪ್ರವೇಶಾತಿ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-

152 (135) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಹeöï ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2020-21ನೇ ಶೈಕ್ಷಣಿಕ ವರ್ಷದಲ್ಲಿ ವೈದ್ಯಕೀಯ ಪ್ರವೇಶಕ್ಕಾಗಿ ನಡೆಸಲಾದ ಸಂದರ್ಶನಕ್ಕೆ ಹಾಜರಾಗಿರುವ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣಕ್ಕಾಗಿ ಪ್ರವೇಶಾವಕಾಶ ದೊರೆಯಲಿಲ್ಲ; ಇದರಲ್ಲಿ ರಾಜ್ಯದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಆ) ಸಂದರ್ಶನಕ್ಕೆ ಹಾಜರಾಗಿರುವ ಅನ್ಯ ರಾಜ್ಯಗಳ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಅದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಪ್ರವೇಶಾವಕಾಶ ದೊರೆತಿದೆ;

(ಇ) 2020-21ನೇ ಶೈಕ್ಷಣಿಕ ವರ್ಷದಲ್ಲಿ ವೈದ್ಯಕೀಯ ಪ್ರವೇಶಕ್ಕಾಗಿ ನಡೆಸಲಾದ ಸಂದರ್ಶನಕ್ಕೆ ಹಾಜರಾಗಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಇದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಕಾಲೇಜುಗಳಲ್ಲಿ ಪ್ರವೇಶಾತಿ ದೊರೆತಿದೆ;

(ಈ) 2020-21ನೇ ಶೈಕ್ಷಣಿಕ ವರ್ಷದಲ್ಲಿ ವೈದ್ಯಕೀಯ ಪ್ರವೇಶಕ್ಕಾಗಿ ನಡೆಸಲಾದ ಸಂದರ್ಶನಕ್ಕೆ ಹಾಜರಾಗಿ ಪ್ರವೇಶಾತಿಗೆ ಅವಕಾಶ ಸಿಗದಿರುವ ವಿದ್ಯಾರ್ಥಿಗಳಿದ್ದರೂ ವೈದ್ಯಕೀಯ ಕಾಲೇಜುಗಳಲ್ಲಿ ಸೀಟುಗಳು ಉಳಿಯಲು ಕಾರಣವೇನು; ಮೊದಲನೇ ಸುತ್ತಿನಲ್ಲಿ ಉಳಿದಿರುವ ಸೀಟುಗಳು ಎಷ್ಟು? (ಕಾಲೇಜುವಾರು ಮಾಹಿತಿ ನೀಡುವುದು)